ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : www.ksrtc.in

ಸಂ/ಕರಾಸ/ಕೇಕ/ಆಡಳಿತ/ಸೇನಿ/223/ 77 /2020-21 ದಿನಾಂಕ: 14-10-2020

# ಸುತ್ತೋಲೆ ಸಂಖ್ಯೆ: 1679

**ವಿಷಯ:** ಕರಾರಸಾ ನಿಗಮದ ನೌಕರರ (ನಡತೆ ಮತ್ತು ಶಿಸ್ತು) ನಿಯಮಾವಳಿ 1971 ರ ನಿಯಮಾವಳಿ 31 ರನ್ವಯ ಸದರಿ ಸಂಸ್ಥೆಯ ದರ್ಜೆ-3 ಮತ್ತು ದರ್ಜೆ-4 ರ ನೌಕರರ ಮೇಲ್ಮನವಿ ಪ್ರಾಧಿಕಾರಗಳನ್ನು ನಿರ್ದಿಷ್ಟಪಡಿಸುವ ಕುರಿತು.

**ಉಲ್ಲೇಖ:** ಸುತ್ತೋಲೆ ಸಂಖ್ಯೆ 1674, ದಿನಾಂಕ: 22-05-2020

----

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಕರಾರಸಾ ನಿಗಮದ ದರ್ಜೆ-3 ಮತ್ತು ದರ್ಜೆ-4 ನೌಕರರ (ದರ್ಜೆ-3 ಮೇಲ್ವಿಚಾರಕ ಸಿಬ್ಬಂದಿಗಳೂ ಸೇರಿದಂತೆ) ಮೇಲ್ಮನವಿಗಳನ್ನು ವಿಲೇವಾರಿ ಮಾಡಲು ಮೇಲ್ಮನವಿ ಪ್ರಾಧಿಕಾರಿಗಳನ್ನು ನಿರ್ದಿಷ್ಟಪಡಿಸಲಾಗಿದೆ.

ಮುಂದುವರೆದಂತೆ, ಆಡಳಿತಾತ್ಮಕ ಕಾರಣಗಳಿಂದ ಮಂಗಳೂರು/ಪುತ್ತೂರು ವಿಭಾಗದ ದರ್ಜೆ-3 ಮತ್ತು ದರ್ಜೆ-4 ನೌಕರರ (ದರ್ಜೆ-3 ಮೇಲ್ವಿಚಾರಕ ಸಿಬ್ಬಂದಿಗಳೂ ಸೇರಿದಂತೆ) ಮೇಲ್ಮನವಿಗಳನ್ನು ವಿಲೇವಾರಿ ಮಾಡಲು ಮೇಲ್ಮನವಿ ಪ್ರಾಧಿಕಾರಿಯನ್ನು ಈ ಕೆಳಗಿನಂತೆ ಪರಿಷ್ಕರಿಸಲಾಗಿದೆ.

| ವಿಭಾಗ | ಮೇಲ್ಮನವಿ ಪ್ರಾಧಿಕಾರ |
|---|---|
| ಮಂಗಳೂರು/ಪುತ್ತೂರು | ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ) |

ಸಂಬಂಧಪಟ್ಟ ಪ್ರಾಧಿಕಾರಿಗಳು ಈ ಮೇಲೆ ತಿಳಿಸಿದಂತೆ ನಿರ್ದಿಷ್ಟಪಡಿಸಲಾದ ಪ್ರಾಧಿಕಾರವನ್ನು ಗಮನದಲ್ಲಿಟ್ಟುಕೊಂಡು ಅದರಂತೆ ಅಧಿಕಾರ ಚಲಾಯಿಸತಕ್ಕದ್ದು ಹಾಗೂ ಸಂಬಂಧಪಟ್ಟವರೆಲ್ಲರೂ ಈ ಮೇಲಿನ ಆದೇಶವನ್ನು ಮನದಟ್ಟುಮಾಡಿಕೊಂಡು ಮುಂದಿನ ಕ್ರಮ ಕೈಗೊಳ್ಳುವುದು. ಉಳಿದಂತೆ ಸುತ್ತೋಲೆ ಸಂಖ್ಯೆ:1674, ದಿನಾಂಕ: 22-05-2020ರಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಈ ಸುತ್ತೋಲೆಯು ತಕ್ಷಣದಿಂದ ಜಾರಿಗೆ ಬರುತ್ತದೆ.

(ಶಿವಯೋಗಿ ಸಿ. ಕಳಸದ, ಭಾ.ಆ.ಸೇ.,)
ವ್ಯವಸ್ಥಾಪಕ ನಿರ್ದೇಶಕರು

**ಪ್ರತಿ ಮಾಹಿತಿಗಾಗಿ:**

1. ಅಧ್ಯಕ್ಷರು/ಉಪಾಧ್ಯಕ್ಷರು, ಕರಾರಸಾ ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರಿಗೆ.
3. ನಿರ್ದೇಶಕರು (ಭ:ಜಾ)/ನಿರ್ದೇಶಕರು(ಸಿ:ಪ), ಕರಾರಸಾ ನಿಗಮ, ರವರಿಗೆ.

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ವಿಭಾಗೀಯ ಮುಖ್ಯಸ್ಥರುಗಳು, ಕರಾರಸಾ ನಿಗಮ ರವರುಗಳಿಗೆ.
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾ ಸಂಸ್ಥೆ/ವಾಕರಸಾ ಸಂಸ್ಥೆ/ಈಕರಸಾ ಸಂಸ್ಥೆ ರವರಿಗೆ.
6. ಮುಖ್ಯ ಭದ್ರತಾ ಮತ್ತು ಜಾಗೃತಾಧಿಕಾರಿ, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) ರವರಿಗೆ ವರದಿ ಸಲ್ಲಿಸುವುದು.
7. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
8. ಪ್ರಧಾನ ಕಛೇರಿ ಪತ್ರ ಕಡತ.